**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಸದಸ್ಯರ ಹೆಸರು | ಶ್ರೀ ಸಿ. ಎನ್ ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 186 (190) |
| ಉತ್ತರಿಸಬೇಕಾದ ದಿನಾಂಕ | 12.08.2025 |
| ಉತ್ತರಿಸಬೇಕಾದವರು | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ 50:50 ಅನುಪಾತದಡಿ ಹಂಚಿಕೆ ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು; | ಮೈಸೂರು ಅಭಿವೃದ್ಧಿ ಪ್ರಾಧಿಕಾರದಿಂದ ಶೇ: 50:50ರ ಅನುಪಾತದಲ್ಲಿ ವಿವಿಧ ಅಳತೆಗಳ ಒಟ್ಟು 1149 ನಿವೇಶನಗಳನ್ನು ಮಂಜೂರು ಮಾಡಲಾಗಿದೆ. |
| ಆ) | 50:50 ಅನುಪಾತದಡಿ ನಿವೇಶನ ಹಂಚಿಕೆ ಮಾಡಲು ಅನುಸರಿಸಿದ ಮಾನದಂಡಗಳೇನು; | ಮೈಸೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಪ್ರಕರಣವು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 87 ಪಿಸಿಇ 2024, ದಿನಾಂಕ: 14.07.2024 ರನ್ವಯ ಸದರಿ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಗೌರವಾನ್ವಿತ ಮಾನ್ಯ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ.ಎನ್ ದೇಸಾಯಿ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ವಿಚಾರಣಾ ಆಯೋಗ ರಚಿಸಲಾಗಿತ್ತು.<br><br>ಸದರಿ ಏಕ ಸದಸ್ಯ ವಿಚಾರಣಾ ಆಯೋಗವು ವಿಚಾರಣೆ ನಡೆಸಿ ದಿನಾಂಕ:30.07.2025 ರಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತದೆ. ಸದರಿ ವಿಚಾರಣಾ ವರದಿಯು ಪರಿಶೀಲನೆಯಲ್ಲಿರುತ್ತದೆ. |
| ಇ) | ಮಾನದಂಡಗಳನುಸಾರ 50:50 ಅನುಪಾತದಡಿ ನಿವೇಶನಗಳ ಹಂಚಿಕೆ ಕ್ರಮವಾಗಿರುವುದನ್ನು ಹೊರತುಪಡಿಸಿ, ಮಾನದಂಡ ಪಾಲಿಸದೆ ನಿವೇಶನಗಳನ್ನು ಹಂಚಿಕೆ ಮಾಡಿರುವ ಪ್ರಕರಣಗಳಲ್ಲಿ ತಪ್ಪುಗಳಾಗಿರುವುದು ಕಂಡು ಬಂದ ಸಂದರ್ಭದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | |
| ಈ) | ನಿಯಮ ಬಾಹಿರವಾಗಿ 50:50 ಅನುಪಾತದಡಿ ನಿವೇಶನ ಹಂಚಿಕೆ ಮಾಡಿರುವ ಪ್ರಕರಣಗಳಿಂದ ಮುಡಾಗೆ ಆಗಿರುವ ಆರ್ಥಿಕ ನಷ್ಟವೆಷ್ಟು; | |
| ಉ) | ಈ ನಷ್ಟ ಭರಿಸುವುದಕ್ಕೆ ಅಥವಾ ನಷ್ಟಕ್ಕೆ ಕಾರಣರಾದವರಿಂದ ವಸೂಲಿ ಮಾಡುವುದಕ್ಕೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು? | |

ಸಂಖ್ಯೆ :ನಅಇ 369 ಮೈಅಪ್ರಾ 2025(ಇ)

(ಬಿ.ಎಸ್ ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು